RNU AIR DHARWAD

APRIL 19,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ರಕ್ತವನ್ನು ಕೃತಕವಾಗಿ ತಯಾರಿಸಲು ಸಾಧ್ಯವಾಗಿಲ್ಲ; ಹೀಗಾಗಿ ರಕ್ತದಾನವೊಂದೇ ಪರ್ಯಾಯ ಎಂದು, ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಸಿ.ಸುಧಾಕರ್ ಹೇಳಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾ ರೆಡ್ ಕ್ರಾಸ್ ಭವನದ, 4 ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು. ಆರೋಗ್ಯವಂತ ವ್ಯಕ್ತಿ, ಮೂರೂವರೆ ತಿಂಗಳಿಗೊಮ್ಮೆ, ಸ್ವಯಂ ಪ್ರೇರಿತರಾಗಿ, ಒಂದು ಯೂನಿಟ್‌ನಷ್ಟು ರಕ್ತದಾನ ಮಾಡಬಹುದು. ನಿಯಮಿತ ರಕ್ತದಾನದಿಂದ, ಆರೋಗ್ಯ ವರ್ಧಿಸುತ್ತದೆ. ತುರ್ತು ಸಂದರ್ಭದಲ್ಲಿ ಹಲವರ ಪ್ರಾಣ ಉಳಿಸುತ್ತದೆ ಎಂದರು. ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ, ರಾಜ್ಯ ಸಭಾಪತಿ, ಬಸ್ರೂರು ರಾಜೀವ್ ಶೆಟ್ಟಿ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡಿದ್ದರು.

<><><>

ಜಾತಿ ಜನ ಗಣತಿ ವರದಿ, ಅವೈಜ್ಞಾನಿಕವಾಗಿ ಸಿದ್ಧಪಡಿಸಲಾಗಿದೆ. ಎಲ್ಲ ಸಮುದಾಯದವರಿಂದ ವಿರೋಧ ವ್ಯಕ್ತವಾಗುತ್ತಿದೆ ಎಂದು, ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸಿಬ್ಬಂದಿ, ಮನೆ–ಮನೆಗೆ ತೆರಳಿ ಸಮೀಕ್ಷೆ ನಡೆಸಿಲ್ಲ. ಅಧಿಕಾರಿಗಳ ಮಟ್ಟದಲ್ಲಿ ಸಿದ್ಧಪಡಿಸಿದ ಜಾತಿ ಗಣತಿ ಇದಾಗಿದ್ದು, ಕೈಬಿಡುವುದು ಸೂಕ್ತ ಎಂದರು.

<><><>

ಕೋಲಾರದಲ್ಲಿ, ಜಾತಿಗಣತಿ ಬಗ್ಗೆ ಮಾತನಾಡಿರುವ, ರಾಜ್ಯ ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ ಅವರು, ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಹಾಗೂ ಜಾತಿ ಜನ ಗಣತಿಯಲ್ಲಿ 1 ಕೋಟಿ 30 ಲಕ್ಷ ಕುಟುಂಬಗಳು, 5 ಕೋಟಿ 98 ಲಕ್ಷ ಜನ ಭಾಗವಹಿಸಿದ್ದಾರೆ. ನ್ಯೂನತೆಗಳಿರಬಹುದು ಆದರೆ ಅವೈಜ್ಞಾನಿಕ ಎನ್ನುವುದು ಸೂಕ್ತವಲ್ಲ ಎಂದರು.

<><><>

ಬೈಟ್: ಕೃಷ್ಣ ಬೈರೇಗೌಡ 36 ಸೆಕೆಂದುಗಳು

<><><>

ರಾಜ್ಯ ಸರ್ಕಾರ, ಅಗತ್ಯ ವಸ್ತುಗಳ ಬೆಲೆ ಏರಿಸಿ, ಪರಿಶಿ ್ಟ ಸಮುದಾಯದ ಅನುದಾನ ದುರ್ಬಳಕೆ ಮಾಡಿಕೊಂಡು, ಅಲ್ಪಸಂಖ್ಯಾತರ ತುಷ್ಟೀಕರಣ ಮಾಡುತ್ತಿದೆ ಎಂದು ಆರೋಪಿಸಿ, ಬಿಜೆಪಿ ಮುಖಂಡರು, ಕಲಬುರಗಿಯಲ್ಲಿ 2ನೇ ಹಂತದ ಜನಾಕ್ರೋಶ ಯಾತ್ರೆ ನಡೆಸಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ವಿದ್ಯುತ್, ನೀರು ಮತ್ತು ಹಾಲಿನ ದರಗಳನ್ನು ಏರಿಸಿ, ಬಡ ಜನರನ್ನು ಸಂಕಷ್ಟಕ್ಕೆ ದೂಡಲಾಗಿದೆ ಎಂದು ಆರೋಪಿಸಿದರು.

ವಿಧಾನ ಪರಿಷತ್ ವಿಪಕ್ಷ ನಾಯಕ, ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡದ, ಅಭಿವೃದ್ಧಿ ನಿಗಮದ 150 ಕೋಟಿ ರೂಪಾಯಿ ಅನುದಾನವನ್ನು, ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂದು, ಟೀಕಿಸಿದರು.

<><><>

ದಾವಣಗೆರೆ, ಚಿತ್ರದುರ್ಗ ಮತ್ತು ಶಿವಮೊಗ್ಗ ಜಿಲ್ಲೆಗಳ, 121 ಕ್ಕೂ ಅಧಿಕ ಕೆರೆಗಳಿಗೆ ನೀರು ತುಂಬಿಸುವ, ಸಾಸ್ವೆಹಳ್ಳಿ ಏತ ನೀರಾವರಿ ಯೋಜನೆ, ಈ ಮಳೆಗಾಲದಲ್ಲಿ ಲೋಕಾರ್ಪಣೆಗೊಳ್ಳಲಿದೆ ಎಂದು, ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜ್ ಹೇಳಿದ್ದಾರೆ. ಚನ್ನಗಿರಿಯ ತೋಟಗಾರಿಕೆ ಉತ್ಪನ್ನ ಮಾರಾಟ ಸಹಕಾರ ಸಂಘ, 'ತುಮ್ಕೋಸ್' ಸಮಾರಂಭದಲ್ಲಿ ಅವರು, ಮಾತನಾಡಿದರು. ಹೊನ್ನಾಳಿ, ಶಿವಮೊಗ್ಗ ಗ್ರಾಮಾಂತರ, ಚನ್ನಗಿರಿ, ಮಾಯಕೊಂಡ, ಹೊಳಲ್ಕೆರೆ, ಚಿತ್ರದುರ್ಗ ತಾಲೂಕಿನ ಕೆರೆಗಳಿಗೆ, ನೀರು ತುಂಬಿಸುವ, 604 ಕೋಟಿ ರೂಪಾಯಿ ಮೊತ್ತದ ಮಹತ್ವಾಕಾಂಕ್ಷೆಯ ಯೋಜನೆ ಇದಾಗಿದೆ, ಎಂದರು.

<><><>

ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ನಂದಿಪುರ, ಜಿ. ಹೊಸಹಳ್ಳಿ, ಚಾರ್ಮಾಡಿ ಘಾಟ್ ಪ್ರದೇಶದ ಹಲವೆಡೆ ಕಾಡಾನೆಗಳ ಉಪಟಳ ಹೆಚ್ಚಾಗಿದ್ದು, ನಿಯಂತ್ರಿಸುವಂತೆ ರೈತರು ಹಾಗೂ ಸಾರ್ವಜನಿಕರು ಆಗ್ರಹಿಸಿದ್ದಾರೆ. ಕಾಡಾನೆ ಹಾವಳಿ ಹೆಚ್ಚಿದ ಪರಿಣಾಮ ಸಾಕಷ್ಟು ಕಡೆ ಕಾಫಿ, ಅಡಕೆ ಬೆಳೆಗಳು ನಾಶವಾಗಿದ್ದು, ರಾಜ್ಯ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವಂತೆ ವಿಧಾನ ಪರಿಷತ್ ಸದಸ್ಯರಾದ ಎಂ.ಕೆ ಪ್ರಾಣೇಶ ಆಗ್ರಹಿಸಿದ್ದಾರೆ.

<><><>

ಗದಗ ಜಿಲ್ಲೆಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಶೌಚಾಲಯ ನಿರ್ವಹಣೆಗಾಗಿ ಶಿಕ್ಷಣ ಇಲಾಖೆಯಿಂದ ಅನುದಾನ ನೀಡಲಾಗುತ್ತಿದೆ. ಅನುದಾನವನ್ನು ಸೂಕ್ತ ರೀತಿಯಲ್ಲಿ ಬಳಕೆ ಮಾಡಿಕೊಂಡು ಶೌಚಾಲಯಗಳನ್ನು ದುರಸ್ತಿಗೊಳಿಸಿ, ಸುಸ್ಥಿತಿಗೆ ತರುವಂತೆ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪ್ರಗತಿ ಪರಿಶೀಲನಾ ಸಮಿತಿ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಹಿರಿಯ ಲೇಖಕ ಡಾಕ್ಟರ್ ವಾಮನ ವಾ. ಗೋಗಟೆ ವಿರಚಿತ ಹಾಗೂ ಕೆ.ಎಸ್ ಸುಶೀಲಾ ಅವರು ಕನ್ನಡಕ್ಕೆ ಅನುವಾದಿಸಿದ 'ವಿದ್ಯಾವಾರಿಧಿ ಶ್ರೀ ಸಮರ್ಥ ರಾಮದಾಸರು' ಕೃತಿ ಲೋಕಾರ್ಪಣೆ, ಧಾರವಾಡದ ಮಹೋಹರ ಗ್ರಂಥ ಮಾಲಾದಲ್ಲಿ ಜರುಗಿತು.

<><><>

ಚಿಕ್ಕಮಗಳೂರು ನಗರದ, ಜಿಲ್ಲಾ ಕೈಗಾರಿಕಾ ಸರಬರಾಜು ಮತ್ತು ಮಾರಾಟ ಸಹಕಾರ ಸಂಘದ ಸಭಾಂಗಣದಲ್ಲಿ ಹಿರಿಯ ಸಾಹಿತಿ, ಕಾದಂಬರಿಗಾರ ಅಜ್ಜಂಪುರ ಜಿ. ಸೂರಿ ಅವರ 87 ನೇ ಜನ್ಮದಿನದ ಅಂಗವಾಗಿ ಬದುಕು–ಬರೆಹ ಕಾರ್ಯಕ್ರಮ ಆಯೋಜಿಸಲಾಯಿತು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>